# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿನ ಪ್ರಶ್ನೆ ಸಂಖ್ಯೆ : 524
ಸದಸ್ಯರ ಹೆಸರು : ಡಾ|| ಧನಂಜಯ ಸರ್ಜಿ (ಪದವೀಧರರ ಕ್ಷೇತ್ರ)
ಉತ್ತರಿಸಬೇಕಾದ ದಿನಾಂಕ : 11.12.2025
ಉತ್ತರಿಸುವ ಸಚಿವರು : ಮಾನ್ಯ ಮುಖ್ಯಮಂತ್ರಿಗಳು

<table>
<tr><th>ಕ್ರ. ಸಂ.</th><th>ಪ್ರಶ್ನೆ</th><th>ಉತ್ತರ</th></tr>
<tr><td>ಅ</td><td>ಯಾವುದೇ ಇಲಾಖೆಗಳಲ್ಲಿ ಹೊಸದಾಗಿ ಹುದ್ದೆಗಳನ್ನು ಸೃಜಿಸುವಾಗ ಆರ್ಥಿಕ ಇಲಾಖೆಯ ಅನುಮತಿ ಪಡೆಯುವುದು ಕಡ್ಡಾಯವೇ; ಹಾಗಿದ್ದಲ್ಲಿ ಕಾರಣವೇನು?;</td><td rowspan="2">ಕರ್ನಾಟಕ ಸರ್ಕಾರದ (ಕಾರ್ಯಕಲಾಪಗಳ ನಿರ್ವಹಣೆ) ನಿಯಮಗಳು 1977 ರ ನಿಯಮ 42 ರಲ್ಲಿ ರಾಜ್ಯದ ಹಣಕಾಸಿನ ಮೇಲೆ ಪರಿಣಾಮ ಉಂಟುಮಾಡುವಂತಹ ವಿಶೇಷವಾಗಿ ಯಾವುದೇ ಹುದ್ದೆಯನ್ನು ಸಾರ್ವಜನಿಕ ಹುದ್ದೆಗೆ ಸೇರಿಸುವ ಅಥವಾ ಸಾರ್ವಜನಿಕ ಸೇವೆಯಿಂದ ರದ್ದುಪಡಿಸುವ ಅಥವಾ ಯಾವುದೇ ಹುದ್ದೆಯ ಅವಧಿಯನ್ನು ಅಥವಾ ಉಪಲಬ್ಧಗಳನ್ನು ವ್ಯತ್ಯಾಸ ಮಾಡುವ ಪ್ರಸ್ತಾವನೆಗಳಿಗೆ ಆರ್ಥಿಕ ಇಲಾಖೆಯ ಅನುಮತಿ ಪಡೆಯಲು ತಿಳಿಸಲಾಗಿರುತ್ತದೆ. ಆದ್ದರಿಂದ ಹುದ್ದೆಗಳ ಸೃಜನೆ ಅಥವಾ ಹುದ್ದೆಗಳ ಸಂಖ್ಯೆಯನ್ನು ಒಳಗೊಂಡ ಯಾವುದೇ ಪ್ರಸ್ತಾವನೆ/ ಯೋಜನೆಗಳ ಕುರಿತು ಆದೇಶಗಳನ್ನು ಹೊರಡಿಸುವ ಪೂರ್ವದಲ್ಲಿ ಆರ್ಥಿಕ ಇಲಾಖೆಯ ಸಹಮತಿ ಪಡೆಯುವುದು ಕಡ್ಡಾಯವಾಗಿರುತ್ತದೆ.</td></tr>
<tr><td>ಆ</td><td>ವಿವಿಧ ಇಲಾಖೆಗಳಲ್ಲಿ ನಿಯಮಾನುಸಾರ ಸೃಜನೆಯಾಗಿರುವ ಹುದ್ದೆಗಳು ಮತ್ತು ನಿವೃತ್ತಿ/ ಮರಣ/ ರಾಜೀನಾಮೆಯಿಂದ ಹುದ್ದೆಗಳು ಖಾಲಿಯಾದಲ್ಲಿ ಭರ್ತಿ ಮಾಡಲು ಆರ್ಥಿಕ ಇಲಾಖೆಯ ಅನುಮತಿ ಅಗತ್ಯವಿದೆಯೇ;ಹಾಗಿದಲ್ಲಿ ಕಾರಣವೇನು?;</td></tr>
<tr><td>ಇ</td><td>ಒಮ್ಮೆ ಸೃಜನೆಯಾದ ಹುದ್ದೆಗಳು ತೆರವಾದಲ್ಲಿ ಸದರಿ ಹುದ್ದೆಗಳು ಭರ್ತಿಗೆ ಆಯಾ ಇಲಾಖೆಯ ಮುಖ್ಯಸ್ಥರೇ ಕೈಗೊಂಡಲ್ಲಿ ಕಾಲಕಾಲಕ್ಕೆ ವಿಳಂಬವಿಲ್ಲದೆ ಹುದ್ದೆಗಳು ಭರ್ತಿಯಾಗಿ ಯುವಕರಿಗೆ ಉದ್ಯೋಗ ಸಿಗುವ ಅವಕಾಶವಿದ್ದು, ಆಡಳಿತ ಸಹ ಚುರುಕಾಗುವುದರ ಕುರಿತು ಸರ್ಕಾರದ ಅಭಿಪ್ರಾಯವೇನು?;</td><td>ಆರ್ಥಿಕ ಇಲಾಖೆಯ ಪೂರ್ವಾನುಮತಿಯನ್ನು ಪಡೆಯದೇ ಆಡಳಿತ ಇಲಾಖೆಗಳು ಹುದ್ದೆಗಳನ್ನು ಭರ್ತಿ ಮಾಡಿಕೊಂಡಲ್ಲಿ ಸದರಿ ಹುದ್ದೆಗಳಿಗೆ ನೀಡಬೇಕಾದ ವೇತನಕ್ಕಾಗಿ ಆಯವ್ಯಯದಲ್ಲಿ ಸೂಕ್ತ ಅನುದಾನವನ್ನು ಕಲ್ಪಿಸಿಕೊಳ್ಳಲು ಸಾಧ್ಯವಾಗುವುದಿಲ್ಲ. ಜೊತೆಗೆ ಆರ್ಥಿಕ ಇಲಾಖೆಯು ಅಗತ್ಯತೆಗೆ ಅನುಗುಣವಾಗಿ ಹುದ್ದೆಗಳನ್ನು ಭರ್ತಿ ಮಾಡಿಕೊಳ್ಳಲು ಸಹಮತಿಸುತ್ತದೆ. ಜೊತೆಗೆ, ಕೆಲವು ಇಲಾಖೆಗಳ ಕಾರ್ಯವೈಖರಿ ಅಥವಾ ಕಾರ್ಯ ಪದ್ಧತಿಗಳಲ್ಲಿ ಬದಲಾವಣೆ ಉಂಟಾದಾಗ, ಸಿಬ್ಬಂದಿಯ ಅವಶ್ಯಕತೆ ಹಾಗೂ ಸಂಖ್ಯೆಯ ಬಗ್ಗೆ ಪರಾಮರ್ಶಿಸಬೇಕಾಗುತ್ತದೆ. ಈ ಕಾರ್ಯಗಳನ್ನು ಆರ್ಥಿಕ ಇಲಾಖೆ ನಿರ್ವಹಿಸುತ್ತದೆ.<br>ಒಂದು ವೇಳೆ ಆಡಳಿತ ಇಲಾಖೆಗಳು ಆರ್ಥಿಕ ಇಲಾಖೆಯ ಸಹಮತಿಯನ್ನು ಪಡೆಯದೇ ತಮ್ಮ ಹಂತದಲ್ಲಿಯೇ ಹುದ್ದೆಗಳನ್ನು ಭರ್ತಿ ಮಾಡಿಕೊಂಡಲ್ಲಿ ಆಯವ್ಯಯದಲ್ಲಿ ಸೂಕ್ತ ಅನುದಾನದ ಕೊರತೆ ಉಂಟಾಗಿ ಸಿಬ್ಬಂದಿಯ ವೇತನ ಪಾವತಿಗೆ ತೊಂದರೆಯಾಗುತ್ತದೆ. ಆರ್ಥಿಕ ಇಲಾಖೆಯ ಅನುಮತಿ ಪಡೆದು ಸೇವೆ ಪಡೆದ ಇಲಾಖೆಗಳ ಸಿಬ್ಬಂದಿಯ ವೇತನ ಪಾವತಿಸಲು ಆಯವ್ಯಯದಲ್ಲಿ ಅಗತ್ಯ ಅನುದಾನ ಕಲ್ಪಿಸಲಾಗುತ್ತದೆ. ಆದುದರಿಂದ ವೇತನ ಪಾವತಿಗೆ ತೊಂದರೆ ಹಾಗೂ ವಿಳಂಬ ಆಗುವುದಿಲ್ಲ.</td></tr>
</table>

| | | |
|---|---|---|
| | | ಆದಾಗ್ಯೂ ಈ ಕೆಳಕಂಡ ಹುದ್ದೆಗಳನ್ನು ಆಡಳಿತ ಇಲಾಖೆಯ ಹಂತದಲ್ಲಿಯೇ ನಿಯಮಾನುಸಾರ ಭರ್ತಿ ಮಾಡಿಕೊಳ್ಳಲು ಇಲಾಖಾ ಕಾರ್ಯದರ್ಶಿಗಳಿಗೆ ತಿಳಿಸಲಾಗಿರುತ್ತದೆ.<br>1. ಮುಂಬಡ್ತಿ ಮೂಲಕ ಭರ್ತಿ ಮಾಡಿಕೊಳ್ಳಬಹುದಾದ ಹುದ್ದೆಗಳು.<br>2. ಅನುಕಂಪ ಆಧಾರದ ನೇಮಕಾತಿಗಳು.<br>3. ಕಲ್ಯಾಣ ಕರ್ನಾಟಕ ವೃಂದದ ಹುದ್ದೆಗಳಲ್ಲಿ ಮಂಜೂರಾದ ಹುದ್ದೆಗಳಲ್ಲಿ ಶೇ. 80 ರವರೆಗೆ ಹುದ್ದೆಗಳ ನೇಮಕಾತಿ.<br>4. ಆರ್ಥಿಕ ಇಲಾಖೆಯಿಂದ ಅನುಮೋದಿಸಲ್ಪಟ್ಟ ಹುದ್ದೆಗಳಲ್ಲಿ ಬ್ಯಾಕ್‌ಲಾಗ್ ಹುದ್ದೆಗಳೆಂದು ಗುರುತಿಸಿರುವ ಹುದ್ದೆಗಳ ನೇಮಕಾತಿ. |

**ಸಂಖ್ಯೆ: ಆಇ 146 ಬಿಜಿಎಲ್ 2025**

(ಸಿದ್ದರಾಮಯ್ಯ)
ಮುಖ್ಯಮಂತ್ರಿ